ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಬೀದರ್ ಜಿಲ್ಲೆಗೆ 14/15ನೇ ಹಣಕಾಸು ಯೋಜನೆಯಡಿ ಬಿಡುಗಡೆಯಾದ ಅನುದಾನ ಕುರಿತು

ಶ್ರೀ ರಘುನಾಥ ರಾವ್ ಮಲ್ಕಾಪುರೆ (ವಿಧಾನ ಸಭೆಯಿಂದ ಚುನಾಯಿತರಾದವರು):-

464(551) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಗೆ 2018ರಿಂದ 2020 ರವರೆಗೆ 14 ಮತ್ತು 15ನೇ ಹಣಕಾಸು ಯೋಜನೆಯಡಿಯಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು; ಬಿಡುಗಡೆಯಾದ ಅನುದಾನದಲ್ಲಿ ಪ್ರತಿ ಗ್ರಾಮ ಪಂಚಾಯಿತಿಗೆ ಎಷ್ಟು ಅನುದಾನ ನೀಡಲಾಗಿದೆ; ಹಾಗೂ ಯಾವ ಲೆಕ್ಕ ಶೀರ್ಷಿಕೆಯಡಿಯಲ್ಲಿ ಮಂಜೂರು ಮಾಡಲಾಗಿದೆ; (ಪ್ರತ್ಯೇಕ ಗ್ರಾಮ ಪಂಚಾಯಿತಿಗಳವಾರು ವರ್ಷವಾರು ಸ್ಪಷ್ಟ ಮಾಹಿತಿ ನೀಡುವುದು)

(ಆ) 2018ರಿಂದ 2020ನೇ ಸಾಲಿನಲ್ಲಿ 14ನೇ ಮತ್ತು 15ನೇ ಹಣಕಾಸು ಯೋಜನೆಯಡಿಯಲ್ಲಿ ಕೈಗೊಂಡ ಕಾಮಗಾರಿಗಳು ಮತ್ತು ಆಯಾಯ ಕಾಮಗಾರಿಗಳಿಗೆ ತಗುಲಿದ ವೆಚ್ಚವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ಸುಮಾರು ಗ್ರಾಮ ಪಂಚಾಯಿತಿಗಳಲ್ಲಿ ಅವ್ಯವಹಾರದಲ್ಲಿ ಭಾಗಿಯಾದ ಸಿಬ್ಬಂದಿ ಮತ್ತು ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು)